ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೨೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**
**(ಮುಂದುವರೆದ ಉಪವೇಶನ)**
**ಸೋಮವಾರ, ದಿನಾಂಕ: ೨೩ನೇ ನವೆಂಬರ್, ೨೦೧೫**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು
೨. ಸಾರಿಗೆ ಸಚಿವರು
೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು
೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
೫. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು
೬. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು
೭. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ವಸತಿ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಯನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೭೬ (೩೧೮೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೊರಾರ್ಜಿದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಆ ಪೈಕಿ ಖಾಯಂ ಆಗದ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಿಬ್ಬಂದಿಗಳನ್ನು ಖಾಯಂಗೊಳಿಸಲು ಉಚ್ಚನ್ಯಾಯಾಲಯದ ಆದೇಶ ಯಾವಾಗ ಆಗಿದೆ ;

(ಇ) ದಿ: ೧೮–೦೬–೨೦೧೫ ಹಾಗೂ ದಿ: ೦೮–೦೮–೨೦೧೫ ರಂದು ಪ್ರಕಟಿಸಿದ ಆಯ್ಕೆ ಪಟ್ಟಿಯಲ್ಲಿರುವ ಸಿಬ್ಬಂದಿಗೆ ನೇಮಕಾತಿ ಆದೇಶ ನೀಡಲಾಗಿದೆಯೇ ;

(ಈ) ಮೂಲದಾಖಲೆಗಳನ್ನು ಪರಿಶೀಲಿಸಿದ್ದರೂ ಕೂಡಾ, ಖಾಯಂ ನೇಮಕಾತಿ ಆದೇಶ ನೀಡದಿರಲು ಕಾರಣಗಳೇನು ;

(ಉ) ದಿ: ೧೮–೦೬–೨೦೧೫ ಹಾಗೂ ದಿ: ೦೮–೦೮–೨೦೧೫ ರಂದು ಪ್ರಕಟಿಸಿದ ಆಯ್ಕೆ ಪಟ್ಟಿಯಲ್ಲಿರುವ ಸಿಬ್ಬಂದಿಗೆ ಯಾವಾಗ ಖಾಯಂ ನೇಮಕಾತಿ ಆದೇಶ ನೀಡಲಾಗುವುದು ?

## ಅಂಗನವಾಡಿಗಳಲ್ಲಿ ನಿರ್ಲಕ್ಷ್ಯದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೭೭ (೩೧೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುರುವೇಕೆರೆ ಕ್ಷೇತ್ರದಲ್ಲಿ ಇರುವ ಅಂಗನವಾಡಿಗಳ ಸಂಖ್ಯೆ ಹಾಗೂ ಪ್ರತಿ ಅಂಗನವಾಡಿಯಲ್ಲಿ ಕಳೆದ ೫ ವರ್ಷಗಳಿಂದ ದಾಖಲಾಗಿರುವ ಮಕ್ಕಳ ಸಂಖ್ಯೆ ಎಷ್ಟು ; (ಪ್ರತಿ ಗ್ರಾಮವಾರು ಪೂರ್ಣ ವಿಳಾಸದೊಂದಿಗೆ ವಿವರ ನೀಡುವುದು)

(ಆ) ಕೆಲವು ಅಂಗನವಾಡಿಗಳನ್ನು ನಿರ್ಲಕ್ಷ್ಯದಿಂದ ಬಾಗಿಲು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವುಗಳು ಯಾವುವು ; ಯಾವ ಕಾರಣಕ್ಕಾಗಿ ಇವುಗಳನ್ನು ಮುಚ್ಚಲಾಗಿದೆ ;

(ಇ) ಈ ಕುರಿತು ತೆಗೆದುಕೊಂಡ ಕ್ರಮಗಳೇನು ; ಇದಕ್ಕೆ ಪರ್ಯಾಯವಾಗಿ ಬೇರೆ ಯಾವ ವ್ಯವಸ್ಥೆ ಮಾಡಲಾಗುವುದು ? (ವಿವರ ನೀಡುವುದು)

## ಸಾಹಿತಿಗಳು ಪ್ರಶಸ್ತಿಗಳನ್ನು ಸರ್ಕಾರಕ್ಕೆ ವಾಪಸ್ಸು ನೀಡುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೮ (೨೮೫೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷಗಳಿಂದ ಕರ್ನಾಟಕ ಸರ್ಕಾರಕ್ಕೆ ಪ್ರಶಸ್ತಿಗಳನ್ನು ಹಿಂದಿರುಗಿಸಿದ ಸಾಹಿತಿ ವಿಜ್ಞಾನಿ ಮತ್ತು ಇತರ ಗಣ್ಯ ವ್ಯಕ್ತಿಗಳ ಸಂಖ್ಯೆ ಎಷ್ಟು ; ಪ್ರಶಸ್ತಿಯನ್ನು ವಾಪಸ್ಸು ಮಾಡಿದ ಗಣ್ಯ ವ್ಯಕ್ತಿಗಳ ಹೆಸರು ಮತ್ತು ಕ್ಷೇತ್ರದ ವಿವರವಾದ ಪಟ್ಟಿಯನ್ನು ನೀಡುವುದು ;

(ಆ) ವಾಪಸ್ಸು ನೀಡಿದ್ದಲ್ಲಿ, ಯಾವ ಉದ್ದೇಶಕ್ಕಾಗಿ ಹಿಂತಿರುಗಿಸಲಾಗಿದೆ ;

(ಇ) ಈ ಬಗ್ಗೆ ಸರ್ಕಾರದ ನಿಲುವೇನು ; ಇದನ್ನು ತಡೆಯಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಅನುದಾನ ಬಿಡುಗಡೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೩೭೯ (೨೯೮೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೫–೧೬ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಗೆ ಆರ್ಥಿಕ ಇಲಾಖೆಯಿಂದ ಬಂದಿರುವ ಅನುದಾನವೆಷ್ಟು ; ಇದರಲ್ಲಿ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ಒದಗಿಸಲಾಗಿದೆ ; (ವಿವರ ನೀಡುವುದು)

(ಆ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಬಳಸದೇ ಇರುವ ಅನುದಾನವೆಷ್ಟು ; ಉಳಿದಿರುವ ಹಾಗೂ ಬಂದಿರುವ ಅನುದಾನವನ್ನು ಯಾವ ಯಾವ ಯೋಜನೆಯಡಿ ಮತ್ತು ಯಾವ ಲೆಕ್ಕಶೀರ್ಷಿಕೆ ಅಡಿ ಹಂಚಿಕೆ ಮಾಡಲಾಗಿದೆ ; (ಕಾಮಗಾರಿಗಳ ಸಹಿತ ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಇ) ೨೦೧೪–೧೫ನೇ ಸಾಲಿನಲ್ಲಿ ಗಿರಿಜನ ಉಪ ಯೋಜನೆಯಡಿಯಲ್ಲಿ ಎಷ್ಟು ಕಾಮಗಾರಿಗಳನ್ನು ಸಿ.ಸಿ.ರಸ್ತೆ, ಚರಂಡಿ ಮತ್ತು ಸಮುದಾಯ ಭವನ ಮಂಜೂರು ಮಾಡಲಾಗಿದೆ ; ಮಂಜೂರಾದ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? ವಿಧಾನಸಭಾ ಕ್ಷೇತ್ರವಾರು ಮತ್ತು ಸಿ.ಸಿ.ರಸ್ತೆ ಮತ್ತು ಚರಂಡಿ/ಸಮುದಾಯ ಭವನಗಳು ಕೈಗೊಂಡ ಸ್ಥಳದ ಮಾಹಿತಿವಾರು ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಡೆಂಗ್ಯು ಮತ್ತು ಚಿಕೂನ್ ಗುನ್ಯಾ ಖಾಯಿಲೆ ಹೆಚ್ಚುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೦ (೨೯೯೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಡೆಂಗ್ಯು ಮತ್ತು ಚಿಕೂನ್ ಗುನ್ಯಾ ಖಾಯಿಲೆಯಿಂದ ರಾಜ್ಯದಲ್ಲಿ ಇದುವರೆಗೆ ಮರಣ ಹೊಂದಿದವರ ಸಂಖ್ಯೆ ಎಷ್ಟು ;

(ಆ) ಈ ಖಾಯಿಲೆಗಳಿಗೆ ಚಿಕಿತ್ಸೆ ಕೊಡುವುದನ್ನೊಳಗೊಂಡು ಖಾಯಿಲೆಯ ನಿಯಂತ್ರಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಇ) ಬೆಂಗಳೂರಿನಲ್ಲಿ ಡೆಂಗ್ಯು ಹಾಗೂ ಚಿಕೂನ್ ಗುನ್ಯಾ ಪೀಡಿತರ ಪ್ರಮಾಣ, ಆಸ್ಪತ್ರೆಗಳಲ್ಲಿ ರೋಗಿಗಳ ಒತ್ತಡ ಮತ್ತು ಅವರಿಗೆ ಸಿಗುವ ಸವಲತ್ತುಗಳ ಬಗ್ಗೆ ಪರಿವೀಕ್ಷಣೆ ಮಾಡಲು ವೈದ್ಯರ ತಂಡವನ್ನು ರಚಿಸಲಾಗಿದ್ದು, ಈ ವೈದ್ಯರು ವರದಿಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ವರದಿಯ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ೨೦೧೫–೧೬ನೇ ಸಾಲಿನ ''ನಾವಿಕ'' ಸಮ್ಮೇಳನದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೮೧ (೩೧೩೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೫–೧೬ನೇ ಸಾಲಿನ ‘‘ನಾವಿಕ’’ ಸಮ್ಮೇಳನಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ ಬಿಡುಗಡೆ ಮಾಡಿದ ಹಣವೆಷ್ಟು ;

(ಆ) ಸದರಿ ಸಮ್ಮೇಳನದಲ್ಲಿ ಭಾಗವಹಿಸಿದ ಕಲಾವಿದರು ಯಾರು ; ಕಲಾವಿದರ ಆಯ್ಕೆಗೆ ಮಾನದಂಡಗಳೇನು ;

(ಇ) ಸದರಿ ಆಯ್ಕೆಯಲ್ಲಿ ಕಲಾವಿದರಲ್ಲದವರನ್ನು ಆಯ್ಕೆ ಮಾಡಲಾಗಿದೆ ಎಂಬ ದೂರುಗಳು ಬಂದಿರುವುದು ನಿಜವೇ ? (ವಿವರ ನೀಡುವುದು)

**ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರಿಗೆ ನೀಡುತ್ತಿರುವ ಸಾಲದ ಬಗ್ಗೆ**

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೨ (೩೧೦೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಮಾಜ ಕಲ್ಯಾಣ ಇಲಾಖೆಯ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗಗಳ ನಿಗಮದ ವತಿಯಿಂದ ಕಿರು ಸಾಲ ಯೋಜನೆ ಚಾಲ್ತಿಯಲ್ಲಿದ್ದು ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದವರಿಗೆ ಸಾಲ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಆ) ಈ ಯೋಜನೆಯಡಿಯಲ್ಲಿ ನೀಡುತ್ತಿರುವ ಗರಿಷ್ಟ ಸಾಲದ ಮೊತ್ತವೆಷ್ಟು ; ಈ ಸೌಲಭ್ಯ ಪಡೆದವರು ಸಾಲದ ಮೊತ್ತವನ್ನು ಗರಿಷ್ಟ ಎಷ್ಟು ಕಂತುಗಳಲ್ಲಿ ಪಾವತಿಸಬೇಕು ಹಾಗೂ ಪಾವತಿಸದಿದ್ದಲ್ಲಿ, ಅವರ ವಿರುದ್ಧ ಕಾನೂನು ರೀತಿಯಲ್ಲಿ ಕೈಗೊಳ್ಳಬಹುದಾದ ಕ್ರಮಗಳೇನು ;

(ಇ) ವಿವಿಧ ರೀತಿಯ ಸಾಲಗಳನ್ನು ಫಲಾನುಭವಿಗಳಿಗೆ ತಲುಪಿಸುವಾಗ ಈ ನಿಗಮದ ಅಧಿಕಾರಿಗಳ / ಸಿಬ್ಬಂದಿಗಳ ಕಿರುಕುಳ ಹಾಗೂ ಲಂಚಗುಳಿತನದಿಂದ ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಈ) ಕಳೆದ ೦೫ ವರ್ಷಗಳಿಂದ ಇಲ್ಲಿಯವರೆವಿಗೆ ಎಷ್ಟು ಅಧಿಕಾರಿಗಳು / ಸಿಬ್ಬಂದಿಗಳನ್ನು ಕರ್ತವ್ಯ ಲೋಪದ ಅಡಿಯಲ್ಲಿ ಶಿಕ್ಷೆಗೆ ಗುರಿಪಡಿಸಲಾಗಿದೆ?

## ಕರ್ನಾಟಕ ರಾಜ್ಯ ಮಹಿಳಾ ವಿವಿಗೆ ಕೊಟ್ಟಿರುವ ಅನುದಾನದ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೮೩ (೩೦೮೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ ನೀಡಿರುವ ಅನುದಾನ ಎಷ್ಟು ;

(ಆ) ಮಹಿಳಾ ವಿಶ್ವವಿದ್ಯಾಲಯ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಂಟಿಯಾಗಿ ಮಹಿಳೆಯರ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಯೋಜನೆಗಳು ಯಾವುವು ; ಸರ್ವೇಕ್ಷಣೆಗಳು ಹಾಗೂ ಸಂಶೋಧನಾ ಕಾರ್ಯಗಳು ಯಾವುವು ;

(ಇ) ರಾಜ್ಯದಲ್ಲಿ ಇರುವ ಏಕೈಕ ಮಹಿಳಾ ವಿಶ್ವವಿದ್ಯಾಲಯದ ಮೂಲಕ ಮಹಿಳೆಯರ ಅಭಿವೃದ್ಧಿಗೆ ಕಾರ್ಯಕ್ರಮ ರೂಪಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಹಾಕಿಕೊಂಡಿರುವ ಯೋಜನೆಗಳು ಯಾವುವು ;

(ಈ) ಮಹಿಳಾ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಮಹಿಳಾ ಕಾಲೇಜುಗಳಿಗೆ ವೇತನಾನುದಾನ ಕೊಡುವ ಕುರಿತು ನಿರ್ಣಯವನ್ನು ಏಕೆ ಕೈಗೊಳ್ಳಬಾರದು;

(ಉ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೂಲಕ ಅಲ್ಲಿ ಓದುತ್ತಿರುವ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ, ಶುಲ್ಕ ರಿಯಾಯಿತಿ, ಸಂಶೋಧನಾ ಕಾರ್ಯಗಳಿಗೆ ನೆರವು ನೀಡುವುದು ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸರ್ಕಾರದ ಚಿಂತನೆ ಏನು ?

## ಇಲಾಖೆಯಿಂದ ವಿವಿಧ ಯೋಜನೆಗಳ ಸೌಲಭ್ಯಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೩೮೪ (೨೮೫೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಮಾಜ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳ ಅಡಿಯಲ್ಲಿ ಇರುವ ಸೌಲಭ್ಯಗಳಾವುವು, ಹಾವೇರಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಯಾವ ಯಾವ ಯೋಜನೆಯ ಅಡಿಯಲ್ಲಿ ಎಷ್ಟು ಫಲಾನುಭವಿಗಳು ಸೌಲಭ್ಯ ಪಡೆದುಕೊಂಡಿರುತ್ತಾರೆ ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿಯಲ್ಲಿ ಬಾಕಿ ಉಳಿದ ಪ್ರಕರಣಗಳು ಎಷ್ಟು ; ಇದಕ್ಕೆ ಕಾರಣವೇನು ; (ಕಳೆದ ೩ ವರ್ಷಗಳ ಯೋಜನಾವಾರು ವಿವರ ನೀಡುವುದು)

(ಇ) ಕರ್ನಾಟಕ ರಾಜ್ಯದಲ್ಲಿ ಇರುವ ಅಲೆಮಾರು ಜನಾಂಗದ ಕುಟುಂಬಗಳು ಎಷ್ಟು ;

(ಈ) ಹಾವೇರಿ ಜಿಲ್ಲೆಯಲ್ಲಿರುವ ಅಲೆಮಾರು ಜನಾಂಗದ ಕುಟುಂಬಗಳ ಸಂಖ್ಯೆ ಎಷ್ಟು ; ಅಲೆಮಾರು ಕುಟುಂಬಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕೈಗೊಂಡ ಕ್ರಮವೇನು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಐ.ಟಿ. ಪಾರ್ಕ್‌ಗಳ ಸ್ಥಾಪನೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೮೫ (೩೦೬೭) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಐ.ಟಿ. ಪಾರ್ಕ್‌ಗಳನ್ನು ಸ್ಥಾಪಿಸಲು ಸರ್ಕಾರ ಮುಂದಾಗಿದೆ ; ಈ ಮೊದಲು ಸ್ಥಾಪಿಸಿದ್ದ ಐಟಿ ಪಾರ್ಕ್‌ಗಳ ವಿವರಗಳನ್ನು ನೀಡುವುದು ;

(ಆ) ಈ ಪೈಕಿ ಕೆಲವು ಪ್ರತಿಷ್ಠಿತ ಕಂಪನಿಗಳು ಸದರಿ ಸ್ಥಳಕ್ಕೆ ಬರಲು ಹಿಂದೇಟು ಹಾಕಿರುವ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣಗಳೇನು ;

(ಇ) ಇಂತಹ ಐ.ಟಿ. ಪಾರ್ಕ್‌ಗಳು ಖಾಲಿ ಇರುವ ವಿಚಾರ ನಿಜವೇ ; ಇದಕ್ಕೆ ಕಾರಣಗಳೇನು ;

(ಈ) ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಉ) ಇದರಿಂದ ಸರ್ಕಾರದ ಉದ್ಯೋಗ ಸೃಷ್ಟಿ ಮತ್ತು ಅಭಿವೃದ್ಧಿಯ ಉದ್ದೇಶಕ್ಕೆ ಹಿನ್ನಡೆಯಾಗುವುದೆಂದು ಭಾವಿಸುವುದಿಲ್ಲವೇ ? (ವಿವರಗಳನ್ನು ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೬ (೩೧೨೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ವ್ಯಾಪ್ತಿಯಲ್ಲಿ ಇರುವಂತಹ ೬೦%ಕ್ಕಿಂತ ಹೆಚ್ಚು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಇರುವುದರಿಂದ ಗರ್ಭಿಣಿಯರಿಗೆ ಸಕಾಲದಲ್ಲಿ ಸೂಕ್ತ ಚಿಕಿತ್ಸೆ ದೊರೆಯದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳು ಹಾಗೂ ಸಮರ್ಪಕವಾದ ಚಿಕಿತ್ಸೆ ದೊರೆಯುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಆರೋಗ್ಯ ಕೇಂದ್ರವಾರು ವಿವರ ನೀಡುವುದು)

## ಬಳ್ಳಾರಿ ಜಿಲ್ಲೆಯಲ್ಲಿರುವ ಡಯಾಲಿಸಿಸ್ ಕೇಂದ್ರಗಳ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೭ (೩೧೭೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ಡಯಾಲಿಸಿಸ್ ಕೇಂದ್ರಗಳಿವೆ ; ಅವುಗಳನ್ನು ಎಲ್ಲೆಲ್ಲಿ ಸ್ಥಾಪಿಸಲಾಗಿದೆ ; ಸದರಿ ಕೇಂದ್ರಗಳು ಕಾರ್ಯಾರಂಭಗೊಂಡಿದ್ದು ಯಾವಾಗ ;

(ಆ) ಈ ಕೇಂದ್ರಗಳಲ್ಲಿ ಡಯಾಲಿಸಿಸ್‌ಗೆ ವಿಧಿಸಲಾಗುತ್ತಿರುವ ಶುಲ್ಕ ಎಷ್ಟು ; ಬಡ ರೋಗಿಗಳಿಗೆ ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡಲಾಗುವುದೇ ;

(ಇ) ಜಿಲ್ಲೆಯಲ್ಲಿ ಪ್ರತಿದಿನ ಎಷ್ಟು ಜನರಿಗೆ ಡಯಾಲಿಸಿಸ್ ಮಾಡಲಾಗುತ್ತಿದೆ ;

(ಈ) ಜಿಲ್ಲೆಯಲ್ಲಿ ಇನ್ನೂ ಹೆಚ್ಚಿನ ಡಯಾಲಿಸಿಸ್ ಕೇಂದ್ರಗಳನ್ನು ಸ್ಥಾಪಿಸಲಾಗುವುದೇ?

## ಕಂಪ್ಯೂಟರ್ ಶಿಕ್ಷಣವನ್ನು ನೀಡಲು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಯೋಜನೆಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೮೮ (೩೦೮೪) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಂಪ್ಯೂಟರ್ ಶಿಕ್ಷಣವನ್ನು ನೀಡಲು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು ;

(ಆ) ಸಾರ್ವಜನಿಕ ಶಿಕ್ಷಣ ಇಲಾಖೆ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ರಾಜ್ಯದಲ್ಲಿ ಸದ್ಯ ತಟಸ್ಥಗೊಂಡಿರುವ ಮಾಹಿತಿ ಸಿಂಧು, ICT ಹಲವು ಹಂತಗಳ ಮುಂದುವರಿಯುವಿಕೆಗೆ ಯೋಜನೆಯನ್ನೇನಾದರೂ ರೂಪಿಸಲಾಗಿದೆಯೇ ;

(ಇ) ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ / ಕಿಯೋನಿಕ್ಸ್ / DSERT ಮೂಲಕ ಕಂಪ್ಯೂಟರ್ ಶಿಕ್ಷಕರ ನೇಮಕಾತಿಯ / ಕಂಪ್ಯೂಟರ್ ಶಿಕ್ಷಣ ನೀಡುವಿಕೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಈ ನಿಟ್ಟಿನಲ್ಲಿ ಸರ್ಕಾರದ ಚಿಂತನೆ ಹಾಗೂ ಕ್ರಮಗಳೇನು ?

## ವಿದ್ಯಾರ್ಥಿ ನಿಲಯಗಳಲ್ಲಿ ಆಹಾರ ಪೂರೈಕೆಯನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ವಹಿಸುವ ಬಗ್ಗೆ

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೩೮೯ (೨೮೮೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಸರ್ಕಾರದ ವತಿಯಿಂದ ನಡೆಸಲಾಗುತ್ತಿರುವ ಸಾರ್ವಜನಿಕ ವಿದ್ಯಾರ್ಥಿ ನಿಲಯಗಳಲ್ಲಿ, ವಿದ್ಯಾರ್ಥಿಗಳಿಗೆ ಈಗ ಒದಗಿಸಲಾಗುತ್ತಿರುವ ಊಟದ ಮತ್ತು ಉಪಹಾರದ ವ್ಯವಸ್ಥೆಯನ್ನು ಇಸ್ಕಾನ್‌ನಂತಹ ಉತ್ತಮ ಸೇವಾ ಹಿನ್ನೆಲೆ ಹೊಂದಿರುವ ಸಂಸ್ಥೆಗಳಿಗೆ ಈ ಜವಾಬ್ದಾರಿ ವರ್ಗಾಯಿಸಲು ಇಲಾಖೆಗೆ ಸಾಧ್ಯವಿಲ್ಲವೆ ;

(ಆ) ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಉಪಹಾರ ಮತ್ತು ಊಟದ ವ್ಯವಸ್ಥೆಯನ್ನು ನಾಡಿನ ಹೆಸರಾಂತ ಸ್ವಯಂಸೇವಾ ಸಂಸ್ಥೆಗಳು ಪೂರೈಕೆ ಮಾಡಲು ಮುಂದಾದಲ್ಲಿ, ಇಲಾಖೆಗೆ ಸಾಕಷ್ಟು ಹಣ ಹಾಗೂ ಸಮಯ ಉಳಿತಾಯವಾಗಲಿದ್ದು, ಇಲಾಖೆಯು ಈ ರೀತಿ ಚಿಂತನೆಯನ್ನು ಈವರೆಗೆ ನಡೆಸದಿರಲು ಕಾರಣಗಳೇನು ;

(ಇ) ಉತ್ತಮ ಗುಣಮಟ್ಟದ, ಶುಚಿಯಾದ, ಪೌಷ್ಠಿಕಾಂಶ ಹೊಂದಿದ ಹಾಗೂ ಸಕಾಲದಲ್ಲಿ ಆಹಾರ ಸರಬರಾಜು ಮಾಡಬಲ್ಲ, ಸೇವಾ ಹಿನ್ನೆಲೆಯುಳ್ಳ ಸ್ವಯಂಸೇವಾ ಸಂಸ್ಥೆಗಳು ಈ ರೀತಿಯ ಅನುಕೂಲತೆಗಳನ್ನು ವಿದ್ಯಾರ್ಥಿ ನಿಲಯಗಳಿಗೆ ಒದಗಿಸಲು ಮುಂದಾದಲ್ಲಿ ಸದರಿ ಜವಾಬ್ದಾರಿಯನ್ನು ಸಂಬಂಧಿಸಿದ ಸ್ವಯಂಸೇವಾ ಸಂಸ್ಥೆಗಳಿಗೆ ಹಸ್ತಾಂತರಿಸಲು ಇಲಾಖೆಗಿರುವ ಆಂತರಿಕ ಸಮಸ್ಯೆಗಳೇನು ? (ವಿವರ ಒದಗಿಸುವುದು)

## ಉತ್ತರ ಕರ್ನಾಟಕದ ಪ್ರತಿಯೊಂದು ಜಿಲ್ಲೆಯಲ್ಲಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಸ್ಥಾಪಿಸುವ ಬಗ್ಗೆ

**ಡಾ: ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೦ (೩೧೩೦) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕರ್ನಾಟಕದ ಜಿಲ್ಲೆಗಳು ವೈದ್ಯಕೀಯ ಶಿಕ್ಷಣ ಸೌಲಭ್ಯಗಳಿಂದ ತೀವ್ರವಾಗಿ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಉತ್ತರ ಕರ್ನಾಟಕದ ಪ್ರತಿಯೊಂದು ಜಿಲ್ಲೆಯಲ್ಲಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಅತ್ಯಾಧುನಿಕ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದೇ;

(ಇ) ಹಾಗಿದ್ದಲ್ಲಿ, ಸ್ಥಾಪಿಸಲಾಗುವುದು ಯಾವಾಗ ;

(ಈ) ಈ ಬಗ್ಗೆ ಡಾ: ಡಿ.ಎಂ. ನಂಜುಂಡಸ್ವಾಮಿರವರ ಶಿಫಾರಸ್ಸುಗಳನ್ನು ವಿಶೇಷ ಆದ್ಯತೆ ಮೇರೆಗೆ ಕಾರ್ಯಗತಗೊಳಿಸಲಾಗುವುದೇ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ.658, ಪ್ರತಿಗಳು 1500